ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಗುರುವಾರ,ದಿನಾಂಕ : 25ನೇ ಜುಲೈ, 2019

31. ಆಧಾರ್ ಕಾರ್ಡ್ ಮಾಡಿಸಲು ಹಾಗೂ ತಿದ್ದುಪಡಿ ಮಾಡಲು ಆಗಿರುವ ತೊಂದರೆ

ಶ್ರೀಎಸ್.ನಾಗರಾಜ್(ಸಂದೇಶ್ ನಾಗರಾಜ್)(ಸ್ಥಳೀಯಸಂಸ್ಥೆಗಳಕ್ಷೇತ್ರ):-

613 (782) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹೊಸದಾಗಿ ಆಧಾರ್ ಕಾರ್ಡ್ ಮಾಡಿಸಲು ಹಾಗೂ ಆಧಾರ್ ಕಾರ್ಡ್ ತಿದ್ದುಪಡಿ ಮಾಡಿಸಲು, ಗ್ರಾಮಾಂತರ ಪ್ರದೇಶದ ಜನ ಸಾಮಾನ್ಯರು ಬವಣೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕೇವಲ ಹೆಡ್ ಪೋಸ್ಟ್ ಆಫೀಸ್‌ಗಳು ಮತ್ತು ಆಯ್ದ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಮಾತ್ರ ಈ ಸೌಲಭ್ಯ ಇದ್ದು, ಪ್ರತಿನಿತ್ಯ ಹಳ್ಳಿಗಾಡಿನಿಂದ ಬರುವ ನೂರಾರು ಸಾರ್ವಜನಿಕರು ಗಂಟೆಗಟ್ಟಲೆ, ದಿನಗಟ್ಟಲೆ ಆಧಾರ್ ಕಾರ್ಡ್ ಪಡೆಯಲು ತೊಂದರೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಮೊದಲಿನಂತೆ ತಾಲ್ಲೂಕು ಕಚೇರಿಯ ನೆಮ್ಮದಿ ಕೇಂದ್ರಗಳು, ಪುರಸಭೆ ಮತ್ತು ಖಾಸಗಿ ಅನುಮತಿ ಪಡೆದ ಸಂಸ್ಥೆಗಳ ಮೂಲಕ ಈ ಆಧಾರ್ ಕಾರ್ಡ್ ಮಾಡಿಸಲು ಮತ್ತು ತಿದ್ದುಪಡಿ ಮಾಡಿಸಲು ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಸೂಕ್ತ ಸಲಹೆ ನೀಡಿ, ಈ ವ್ಯವಸ್ಥೆಯನ್ನು ಜಾರಿಗೆ ತರಲು ಕ್ರಮ ತೆಗೆದುಕೊಳ್ಳುವುದೇ?